ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 23 ನೇ ಸೆಪ್ಟೆಂಬರ್, 2020

ಲೋಕೋಪಯೋಗಿ ಇಲಾಖೆಗೆ ನೀಡಿರುವ ಅನುದಾನದ ಕುರಿತು

ಶ್ರೀರಘುನಾಥ್‌ರಾವ್‌ಮಲ್ಕಾಪೂರೆ (ವಿಧಾನಸಭೆಯಿಂದಚುನಾಯಿತರಾದವರು):-

347 (444) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) 2019-2020ರ ಆಯವ್ಯಯದಲ್ಲಿ ವಿವಿಧ ಲೆಕ್ಕಶೀರ್ಷಿಕೆಯಡಿಯಲ್ಲಿ ಲೋಕೋಪಯೋಗಿ ಇಲಾಖೆಗೆ ಒದಗಿಸಿರುವ ಅನುದಾನವೆಷ್ಟು ; (ವಿಧಾನಸಭಾ ಕ್ಷೇತ್ರವಾರು ಹಂಚಿಕೆ ಮಾಡಿರುವ ಬಗ್ಗೆ ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ಸದರಿ ಅನುದಾನದಲ್ಲಿ ಬೀದರ್ ಜಿಲ್ಲೆಯಲ್ಲಿ ಯಾವ ಯಾವ ಕಾಮಗಾರಿಗಳನ್ನು ಮತ್ತು ರಸ್ತೆಗಳನ್ನು ನಿರ್ಮಿಸಲಾಗಿದೆ; (ಕಾಮಗಾರಿವಾರು, ತಾಲ್ಲೂಕುವಾರು ವಿವರ ಒದಗಿಸುವುದು)

(ಇ) ಬಿಡುಗಡೆಯಾದ ಅನುದಾನದಿಂದ ಕಟ್ಟಡ ಕಾಮಗಾರಿಗಳು, ರಸ್ತೆ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆಯೇ ; ಪೂರ್ಣಗೊಳಿಸದಿದ್ದಲ್ಲಿ, ಯಾವಾಗ ಪೂರ್ಣಗೊಳಿಸಲಾಗುವುದು; (ವಿವರ ನೀಡುವುದು)

(ಈ) ಬೀದರ್ ಜಿಲ್ಲೆಗೆ ವಿವಿಧ ಲೆಕ್ಕಶೀರ್ಷಿಕೆಯಡಿ ನೀಡಿದ್ದ ಅನುದಾನದಲ್ಲಿ 2019-2020ರ ಆಗಸ್ಟ್ ಅಂತ್ಯಕ್ಕೆ ಉಳಿದಿರುವ ಹಣವೆಷ್ಟು? (ಸಂಪೂರ್ಣ ಮಾಹಿತಿ ನೀಡುವುದು)